**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ತುಮಕೂರು-ಮಧುಗಿರಿ**

**ಎಸ್.ಸಿ.ಸಂಖ್ಯೆಃ** 5016/2025 ಫ್ರಾಸಾ-10
ಚಾಸಾ-04

ದಿನಾಂಕಃ 26-03-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋದಿಸಲಾಯಿತು.

| | |
|---|---|
| **ಹೆಸರು** | ದೇವರಾಜು |
| **ತಂದೆಯ / ಗಂಡನ ಹೆಸರು** | ದೊಡ್ಡಯ್ಯ |
| **ವಯಸ್ಸು** | 35 |
| **ಉದ್ಯೋಗ** | ವ್ಯವಸಾಯ |
| **ವಾಸಸ್ಥಳ** | ಮಲ್ಲೇಕಾವು |

**ಮುಖ್ಯ ವಿಚಾರಣೆ ಸರ್ಕಾರಿ ಅಭಿಯೋಜಕರಿಂದ ಃ-**

ಚಾಸಾ-2 ಮತ್ತು ಆರೋಪಿ ಪರಿಚಯ ಇರುತ್ತದೆ. ಅಣ್ಣ ತಮ್ಮಂದಿರ ಮದ್ಯೆ ಏನು ದ್ವೇಷ ಇತ್ತು ಎಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ. ನಾನು ಯಾವುದೇ ಘಟನೆ ನೋಡಿರುವುದಿಲ್ಲ, ಪೊಲೀಸರ ಮುಂದೆ ಹೇಳಿಕೆ ಕೊಟ್ಟಿರುವುದಿಲ್ಲ.

**(ಈ ಹಂತದಲ್ಲಿ ಮಾನ್ಯ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರಿದ್ದರಿಂದ ಅನುಮತಿಸಲಾಯಿತು)**

**ಪಾಟೀಸವಾಲು ಮಾನ್ಯ ಸರ್ಕಾರಿ ಅಭಿಯೋಜಕರಿಂದ ಃ-**

ಚಾಸಾ-2 ಮತ್ತು ಆರೋಪಿತನ ಮದ್ಯೆ ಜಮೀನಿನ ವಿಚಾರಕ್ಕೆ ವೈಮನಸ್ಸು ಇತ್ತು ಎಂದರೆ ನನಗೆ ಗೊತ್ತಿಲ್ಲ. ನಾನು, ಚಾಸಾ-2 ನಮ್ಮ ಮನೆ ಮುಂದೆ ಹೋಗುತ್ತಿದ್ದಾಗ ಆರೋಪಿ ಚಾಸಾ-2 ರವರ ಮನೆ ಹತ್ತಿರ ಬಂದು ಅವಾಚ್ಯ ಶಬ್ದಗಳಿಂದ ಬೈದು ಮಚ್ಚು ಮತ್ತು ಡ್ರಾಗನ್ ನಿಂದ ತಲೆಗೆ ಮತ್ತು ಮೈಕೈ ಗೆ ಹಲ್ಲೆ ಮಾಡಿ ಕೊಲೆ ಪ್ರಯತ್ನ ಮಾಡಿರುತ್ತಾನೆ ಆ ಸಮಯದಲ್ಲಿ ನಾನು ಮತ್ತು

ಚಾಸಾ-3 ಹೋಗಿ ಉಪಚರಿಸಿ ಅವರನ್ನು ಕೊರಟಗೆರೆ ಸಾರ್ವಜನಿಕ ಆಸ್ಪತ್ರೆಗೆ ಕಳುಹಿಸಿಕೊಟ್ಟಿರುತ್ತೇವೆ ಎಂದರೆ ಸರಿಯಲ್ಲ. ನಾನು ಘಟನೆಯನ್ನು ಕಣ್ಣಾರೆ ಕಂಡಿದ್ದರೂ ಕೂಡ ಸುಳ್ಳು ಹೇಳುತ್ತಿದ್ದೆನೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿದ ಹೇಳಿಕೆಯನ್ನು ನಿಪಿ-15 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.**

**ಮರುವಿಚಾರಣೆ ಇಲ್ಲ.**

(ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

**ಒ ತಿ ಹೇ ಸ ಇದೆ.**

**4 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**

**ತುಮಕೂರು-ಮಧುಗಿರಿ.**